ಗರಿಷ್ಠ 33°C | ಕನಿಷ್ಠ 22°C

ಹೆಗ್ಗಡಿಹಳ್ಳಿಯಲ್ಲಿ ಬಸವ ಜಯಂತಿ ಪ್ರತಿಭಾ ಪುರಸ್ಕಾರ

ಅರಕಲಗೂಡು: ಸಮೀಪದ ಹೆಗ್ಗಡಿಹಳ್ಳಿ ಗ್ರಾಮದಲ್ಲಿ ಶ್ರೀ ಬಸವಣ್ಣನವರ ಜಯಂತಿ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಆದಿಚುಂಚನಗಿರಿ ಹಾಸನ ಶಾಖಾ ಮಠದ ಕಾರ್ಯದರ್ಶಿ ಶ್ರೀ ಶಂಭುನಾಥ ಸ್ವಾಮೀಜಿ ಮಾತನಾಡಿ, ಸಂಕೀರ್ಣ ಸಮಸ್ಯೆಗಳಿಂದ ಕಂಗೆಟ್ಟ ಸಮಾಜದ ಜನರ ಬದುಕಿಗೆ ಸರಳತೆ, ಸತ್ಯ, ಸಮಾನತೆಗಳನ್ನು ಬೋಧಿಸಿದವರು ಜಗಜ್ಯೋತಿ ಬಸವೇಶ್ವರರು. ಶರಣರು ಸಮಾನತೆಯನ್ನು ಬೋಧಿಸಿದ್ದು ಮಾತ್ರವಲ್ಲ ಅರಿತು ಆಚರಿಸಿದ ಮಹಾ ಮಾನವತಾವಾದಿ, ಜಗತ್ತಿನ ಶ್ರೇಷ್ಠ ಚಿಂತಕ ಜಗಜ್ಯೋತಿ ಬಸವಣ್ಣನವರು ಕರ್ನಾಟಕದ ಕೀರ್ತಿ ಕಳಶ. ಎಲ್ಲಾ ಕಾಲಕ್ಕೂ ಪ್ರಸ್ತುತವಾಗಿರುವ ಅವರ ಚಿಂತನೆಗಳು ಜಗತ್ತಿನ ಎಲ್ಲಾ ಮಾನವ ಸಮಾಜಕ್ಕೂ ಮಾದರಿ ಎಂದರು. ಈ ಸಂದರ್ಭದಲ್ಲಿ ಗ್ರಾಮದ ಆರಾಧ್ಯ ದೈವವಾದ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಅಭಿಷೇಕ, ಪೂಜೆ ಸಲ್ಲಿಸಲಾಯಿತು. ನಂತರ ಜಗಜ್ಯೋತಿ ಬಸವಣ್ಣರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಲಾಯಿತು. ನಂತರ ಮಲ್ಲಿಪಟ್ಟಣ ಹೋಬಳಿಯ ಸುತ್ತಮುತ್ತಲಿನ ಗ್ರಾಮಗಳ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಅತ್ಯಧಿಕ ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಆದಿಚುಂಚನಗಿರಿ ಹಾಸನ



ಹಾಸನದಲ್ಲಿ ಇಂದು ಮತ್ತು ನಾಳೆ ನಡೆಯುವ ಪತ್ರಕರ್ತರು- ಅಧಿಕಾರಿಗಳ ಸೌಹಾರ್ದ ಕ್ರಿಕೆಟ್ ಪಂದ್ಯಾವಳಿಯ ಲೋಗೋ, ಟಿ ಶರ್ಟ್ ಹಾಗೂ ಟ್ರೋಫಿಯನ್ನು ಶುಕ್ರವಾರ ಅನಾವರಣ ಮಾಡಲಾಯಿತು. ರಾಜ್ಯ ಸಂಘದ ಉಪಾಧ್ಯಕ್ಷ ಮದನ್ ಗೌಡ, ಪ್ರಮೋದ್ ಇತರರು ಇದ್ದರು.



ಅರಕಲಗೂಡು ತಾಲೂಕಿನ ದೊಡ್ಡಮಗ್ಗೆ ಹೋಬಳಿ ಬೆಳವಾಡಿ ಗ್ರಾಮದಲ್ಲಿ ಶಾಸಕ ಎ.ಮಂಜು ಅವರು ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿ ಅನಾವರಣಗೊಳಿಸಿದರು. ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ ಚನ್ನಕೇಶವ, ಮುಖ್ಯ ಭಾಷಣಕಾರ ರತ್ನಾಕರ್ ಮೊದಲಾದವರು ಪಾಲ್ಗೊಂಡಿದ್ದರು.

ಸುದ್ದಿ ಸಿಂಚನ

ಕಿತ್ತನಕೆರೆಯಲ್ಲಿ ಶ್ರೀಕರಿಯಮ್ಮದೇವಿ-ಆಂಜನೇಯಸ್ವಾಮಿ ಜಾತ್ರೋತ್ಸವ



ಅರಸೀಕೆರೆ: ತಾಲೂಕಿನ ಕಣಕಟ್ಟೆ ಹೋಬಳಿ ಕಿತ್ತನಕೆರೆ ಗ್ರಾಮದೇವತೆ ಶ್ರೀ ಕರಿಯಮ್ಮ ದೇವಿ ಹಾಗೂ ಶ್ರೀ ಆಂಜನೇಯಸ್ವಾಮಿ ಅವರ ಜಾತ್ರಾ ಮಹೋತ್ಸವವು ಭಕ್ತಿ, ಸಂಭ್ರಮ ಮತ್ತು ವೈಭವದ ನಡುವೆ ಅದ್ಧೂರಿಯಾಗಿ ನೆರವೇರಿತು. ಮೇ 2ರಿಂದ ಆರಂಭವಾದ ಜಾತ್ರಾ ಮಹೋತ್ಸವದಲ್ಲಿ ಶ್ರೀ ಕರಿಯಮ್ಮ ದೇವಿ ಮತ್ತು ಶ್ರೀ ಚೌಡೇಶ್ವರಿ ದೇವಿ ದೇವಾಲಯ ಸೇವಾ ಟ್ರಸ್ಟ್ ಆಶ್ರಯದಲ್ಲಿ ಪ್ರತಿದಿನವೂ ವಿವಿಧ ಧಾರ್ಮಿಕ ಮತ್ತು ಸಾಂಪ್ರದಾಯಿಕ ಕಾರ್ಯಕ್ರಮಗಳು ನಡೆಯುತ್ತಿದ್ದು, ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ದೇವಾಲಯವನ್ನು ತಳಿರು ತೋರಣಗಳು, ವಿದ್ಯುತ್ ದೀಪಾಲಂಕಾರಗಳಿಂದ ಅಲಂಕರಿಸಲಾಗಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದರು. ಜಾತ್ರೆಯ ಅಂಗವಾಗಿ ಶ್ರೀ ಆಂಜನೇಯ ಸ್ವಾಮಿಗೆ 101 ಎಡೆ ಸೇವೆ, ಶ್ರೀ ಕರಿಯಮ್ಮ ದೇವಿಗೆ ಮಧುವಣಿಗೆ ಶಾಸ್ತ್ರ, ಮುತ್ತಿನ ವಾಹನೋತ್ಸವ, ಧ್ವಜಾರೋಹಣ, ಬಾನದ ಕಾರ್ಯಕ್ರಮ, ಬೇವಿನ ಸೀರೆ ಉತ್ಸವ, ಆನೆ ಉತ್ಸವ, ಸಿರಿ ಕಾರ್ಯಕ್ರಮ ಹಾಗೂ ಬೆಳ್ಳಿ ರಥೋತ್ಸವ ಸೇರಿದಂತೆ ಹಲವು ಧಾರ್ಮಿಕ ವಿಧಿವಿಧಾನ ಗಳನ್ನು ಸಂಪ್ರದಾಯಬದ್ಧವಾಗಿ ನೆರವೇರಿಸಲಾಯಿತು. ಶುಕ್ರವಾರ ಮಧ್ಯಾಹ್ನ 12.35ಕ್ಕೆ ನಡೆದ ಮಹಾರಥೋತ್ಸವವು ಜಾತ್ರೆಯ ಪ್ರಮುಖ ಆಕರ್ಷಣೆಯಾಗಿತ್ತು. ಬಾಣಾವರ, ಕಿತ್ತನಕೆರೆ ಸೇರಿದಂತೆ ಸುತ್ತಮುತ್ತಲಿನ 12 ಹಳ್ಳಿಗಳ ಗ್ರಾಮಸ್ಥರು ಹಾಗೂ ಸಾವಿರಾರು ಭಕ್ತರು ಭಾಗವಹಿಸಿ ಭಕ್ತಿಭಾವದಿಂದ ರಥವನ್ನು ಎಳೆಯುವ ಮೂಲಕ ತಮ್ಮ ಹರಕೆ ಸಮರ್ಪಿಸಿದರು. ಜೈ ಕರಿಯಮ್ಮ, ಹಾಗೂ ಜೈ ಆಂಜನೇಯ ಎಂಬ ಘೋಷಣೆಗಳು ಮೊಳಗುತ್ತಿದ್ದು, ಇಡೀ ಗ್ರಾಮ ಭಕ್ತಿ ಸಾಗರದಲ್ಲಿ ತೇಲಿದಂತಾಯಿತು. ಮಹಾರಥೋತ್ಸವದ ಬಳಿಕ ಭಕ್ತಾದಿಗಳಿಗೆ ಮಹಾದಾಸೋಹ ವ್ಯವಸ್ಥೆ ಮಾಡಲಾಗಿದ್ದು, ಸಾವಿರಾರು ಭಕ್ತರು ಪ್ರಸಾದ ಸ್ವೀಕರಿಸಿದರು. ಸಂಜೆ ನಡೆದ ಉಯ್ಯಾಲೋತ್ಸವ ಭಕ್ತರ ಅದ್ಧೂರಿ ಮಣೆವು ಗಮನ ಸೆಳೆಯಿತು.

ವಿಶ್ವ ರೆಡ್ ಕ್ರಾಸ್ ದಿನಾಚರಣೆ

ಚನ್ನರಾಯಪಟ್ಟಣ: ರಕ್ತದಾನ ಮಾಡಿ ಜೀವ ಉಳಿಸಿ ಎಂದು ಸ್ಥಳೀಯ ಶಾಸಕ ಸಿ.ಎನ್.ಬಾಲಕೃಷ್ಣ ತಿಳಿಸಿದ್ದಾರೆ. ಪಟ್ಟಣದ ತಾಲೂಕು ಸರ್ಕಾರಿ ನೌಕರರ ಸಂಘದ ಸಮುದಾಯ ಭವನದಲ್ಲಿ ಭಾರತೀಯ ರೆಡ್ ಕ್ರಾಸ್ ತಾಲೂಕು ಘಟಕದ ವತಿಯಿಂದ ವಿಶ್ವ ರೆಡ್ ಕ್ರಾಸ್ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ ರಕ್ತದಾನ ಮಾಡಿ ಜೀವ ಉಳಿಸಿ ಇದರ ಮೂಲ ಉದ್ದೇಶ ಒಬ್ಬ ಮನುಷ್ಯ ರಕ್ತದಾನ ಮಾಡಿದರೆ ಮೂರು ಪ್ರಾಣಗಳನ್ನು ಉಳಿಸಬಹುದಾಗಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಘಟಕದ ರೆಸ್ಟೋಸ್ ಸಂಸ್ಥೆಯ ಸಭಾಪತಿ ಮೋಹನ್ ತಾಲೂಕು ದಂಡಾಧಿಕಾರಿ ಶಂಕರಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಸತೀಶ್, ಬಿಜೆಪಿ ಮುಖಂಡ ಚಿದಾನಂದ್, ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆಯ ಉಪ ಸಭಾಪತಿ ವೀರಭದ್ರಪ್ಪ, ಕಾರ್ಯದರ್ಶಿ ಶಬ್ಬೀರ್ ಅಹ್ಮದ್, ನಿರ್ದೇಶಕರಾದ ಉದಯಕುಮಾರ್ ಮುಂತಾದವರಿದ್ದರು.

ಜಲಾಶಯದ ಮಟ್ಟ

ಹೇಮಾವತಿ 08-05-2026

ಗರಿಷ್ಠ ಮಟ್ಟ	2922 (ಅಡಿಗಳು)
ಇಂದಿನ ಮಟ್ಟ	2895.41 ಅಡಿಗಳು
ಒಳಹರಿವು	49 ಕ್ಯುಸೆಕ್
ಹೊರ ಹರಿವು	300 ಕ್ಯುಸೆಕ್

ಡಿಎಂಕೆ-ಎಐಎಡಿಎಂಕೆ ಸರ್ಕಾರ ಮಾಡೋ ನಂಬಿಕೆಯಿಲ್ಲ

ಮಾವಿನಕೆರೆಯಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿಕೆ | ತಮಿಳುನಾಡಿನ ಉಚಿತಗಳ ಸರಮಾಲೆ: ದೇವರೇ ಕಾಪಾಡಬೇಕು

• **ಕನ್ನಡಪ್ರಭ ವಾರ್ತೆ** ಹೊಳೆನರಸೀಪುರ

ಕೆಲವೊಂದು ಸಂದರ್ಭದಲ್ಲಿ ಸರ್ಕಾರ ರಚನೆ ವಿಚಾರದಲ್ಲಿ ಆಯಾ ರಾಜ್ಯದ ರಾಜ್ಯಪಾಲರು ಅವರದ್ದೇ ಆದ ಕಾನೂನು ಪಂಡಿತರ ಸಲಹೆ ಮೇರೆಗೆ ನಿರ್ಧಾರವನ್ನು ತೆಗೆದುಕೊಂಡಿದ್ದನ್ನು ಕಂಡಿದ್ದೇವೆ. ಅವರು ಸ್ಪಷ್ಟ ಬಹುಮತದ ಸಂಖ್ಯೆ ಸ್ಪಷ್ಟಪಡಿಸಿ ಎಂದಿದ್ದಾರೆ. ಡಿಎಂಕೆ-ಎಐಎಡಿಎಂಕೆ ಎರಡು ಪಕ್ಷಗಳು ಸೇರಿ ಸರ್ಕಾರ ಮಾಡುವುದನ್ನು ನಾನಂತೂ ನಿರೀಕ್ಷೆ ಮಾಡಲ್ಲ. ಅದೆಲ್ಲಾ ಊಹಾಪೋಹ ಎಂದು ಕೇಂದ್ರ ಸಚಿವ ಎಚ್. ಡಿ.ಕುಮಾರಸ್ವಾಮಿ ತಿಳಿಸಿದರು.

ತಾಲೂಕಿನ ಹಳೇಕೋಟೆಯ ಬೆಟ್ಟದ ಶ್ರೀ ರಂಗನಾಥಸ್ವಾಮಿ ದೇವಾಲಯದಲ್ಲಿ ಶುಕ್ರವಾರ ಪೂಜೆ ಸಲ್ಲಿಸಿ ಮಾತನಾಡಿದರು. ವಿಜಯ್ ಅವರು ಸಹ ಬಹುಮತ ಸಾಬೀತುಪಡಿಸಲು ಪ್ರಯತ್ನ ಮಾಡುತ್ತಿದ್ದಾರೆ ಮತ್ತು ಎರಡು ದಿನದಲ್ಲಿ ಅಸ್ಪಷ್ಟತೆ ಸರಿಪಡಿಸುವ ಸಾಧ್ಯತೆ ಇದೆ. ಜತೆಗೆ ಸ್ಟಾಲಿನ್ ಅವರು ಆರು ತಿಂಗಳು ಸರ್ಕಾರ ನಡೆಸಲಿ ತೊಂದರೆ ಕೊಡಲ್ಲ ಎಂದಿದ್ದಾರೆ. ಟಿವಿಕೆಗೆ ಕಾಂಗ್ರೆಸ್ ಬೆಂಬಲ ಕುರಿತು ಮಾತನಾಡಿ, ಕಾಂಗ್ರೆಸ್ ಪಕ್ಷದ ನಡವಳಿಕೆ ಬಗ್ಗೆ ಸಾಕಷ್ಟು ಕಂಡಿದ್ದೇವೆ, ಕಾಂಗ್ರೆಸ್ ಪಕ್ಷ ಯಾವ್ಯಾವ ಸಂದರ್ಭದಲ್ಲಿ, ಯಾವ್ಯಾವ ರೀತಿ ಸರ್ಕಾರಗಳನ್ನು ಅಸ್ಥಿರಗೊಳಿಸಿದ್ದಾರೆ. ಕೇಂದ್ರದಲ್ಲಿದ್ದಂತಹ ಚರಣ್ ಸಿಂಗ್ ಅವರಿಂದ ಪ್ರಾರಂಭವಾಗಿ ವಿಪಿ ಸಿಂಗ್, ಚಂದ್ರಶೇಖರ್, ಅದೇ ರೀತಿ ದೇವೇಗೌಡರು ಅಧಿಕಾರದಲ್ಲಿದ್ದಾಗ ಯಾವ ಕಾರಣಗಳನ್ನು ಕೊಟ್ಟು ಸರ್ಕಾರ ತೆಗೆದರು. ಕಾಂಗ್ರೆಸ್‌ನಲ್ಲಿ ಅವರಿಗೆ ಬೇಕಾದ ರೀತಿಯಲ್ಲಿ ತೀರ್ಮಾನ ಮಾಡುವ ಹಲವಾರು ಉದಾಹರಣೆಗಳನ್ನು ಕೊಡಬಹುದು. ಇವತ್ತು ಡಿಎಂಕೆ ಜೊತೆ ಇಪ್ಪತ್ತು ವರ್ಷದ ಸಂಬಂಧ ಕಡಿದು ವಿಜಯ್ ಅವರ ಜೊತೆ ಸೇರಿದ್ದಾರೆ. ಅವರ ಪಕ್ಷದ ಮುಂದಿನ ಭವಿಷ್ಯದ ದೃಷ್ಟಿಯಿಂದ ತೀರ್ಮಾನ ತೆಗೆದುಕೊಂಡಿದ್ದಾರೆ. ಅದರ ಬಗ್ಗೆ ನಾನೇಕೆ ಚರ್ಚೆ ಮಾಡಲಿ. ಕಾಲ ಅದಕ್ಕೆ ಉತ್ತರ ಕೊಡುತ್ತದೆ ಎಂದರು.



ಹೊಳೆನರಸೀಪುರ ತಾಲೂಕಿನ ಹಳೇಕೋಟೆ ಹೋಬಳಿಯ ಮಾವಿನಕೆರೆ ರಂಗನಾಥಸ್ವಾಮಿ ಬೆಟ್ಟಕ್ಕೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಪೂಜೆ ಸಲ್ಲಿಸಿದರು. ಈ ವೇಳೆ ಶಾಸಕ ಸ್ವರೂಪ್ ಪ್ರಕಾಶ್ ಇದ್ದರು.

ಗ್ಯಾರಂಟಿ ನೀಡಲು 6ರಿಂದ 7 ಲಕ್ಷ ಕೋಟಿ ಬೇಕು: ತಮಿಳುನಾಡಿನಲ್ಲಿ ನಾನಂತೂ ನಿರೀಕ್ಷೆ ಮಾಡಿದ್ದೆ, ಒಂದು ತಿಂಗಳ ಹಿಂದೆ ನಮ್ಮ ಸ್ನೇಹಿತರಿಗೆ ಹೇಳಿದ್ದೆ. ಕಳೆದ ಐವತ್ತು ವರ್ಷಗಳಿಂದ ಎರಡು ದ್ರಾವಿಡ ಪಕ್ಷಗಳ ಆಡಳಿತ ಏನೆಂದು ಅಲ್ಲಿಯ ಜನ ನೋಡಿದ್ರು, ಆದ್ದರಿಂದ ಒಂದು ಹೊಸ ವ್ಯವಸ್ಥೆ ತರಲು ಜನಸಾಮಾನ್ಯರು ನಿರ್ಧಾರ ಮಾಡ್ತಾರೆ ಎನ್ನುವ ನಿರೀಕ್ಷೆ ಇಟ್ಟಿದ್ದೆ ಎಂದರು. ತಮಿಳುನಾಡಿನಲ್ಲಿ ಸ್ವಲ್ಪ ಸಿನಿಮಾದ ಪ್ರಭಾವಕ್ಕೆ ಒಳಗಾಗುತ್ತಾರೆ, ಹಲವಾರು ಸಂದರ್ಭದಲ್ಲಿ ನಡೆದಿದೆ, ಈಗಲೂ ನಡೆದಿದೆ. ಒಂದು ಹೊಸ ಮುಖ, ವ್ಯಕ್ತಿ ಅಧಿಕಾರ ಕೊಡಬೇಕು ಎಂದು ಕೊಟ್ಟಿದ್ದಾರೆ. ಉಚಿತ ಗ್ಯಾರಂಟಿಗಳ ಬಗ್ಗೆ ದೇವರು ಕಾಪಾಡಬೇಕು, ವಿಜಯ್ ಅವರಿಗೆ ಯಾರು ಉಚಿತ ಗ್ಯಾರಂಟಿಗಳನ್ನು ಘೋಷಣೆ ಮಾಡಲು ಯಾರು ಪ್ರಭಾವ ಬೀರಿದ್ರೊ ಗೊತ್ತಿಲ್ಲ, ಅಲ್ಲಿಯ ಬಜೆಟ್ ವರ್ಷಕ್ಕೆ 3.40 ಲಕ್ಷ ಕೋಟಿ ಇದೆ ಮತ್ತು ಅವರ ಉಚಿತ ಗ್ಯಾರಂಟಿಗಳನ್ನು ನೀಡಲು 6 ರಿಂದ 7 ಲಕ್ಷ ಕೋಟಿ ಬೇಕು ಎಂದು ತಿಳಿಸಿ, ಅದ್ಯಾವ ತರ ಹಣ ಹೊಂದಿಸುತ್ತಾರೆ ಕಾದು ನೋಡಬೇಕು ಎಂದು ಮಾರ್ಮಿಕವಾಗಿ ನುಡಿದರು. ಈಗೀನ ಪಂಚರಾಜ್ಯಗಳ ಫಲಿತಾಂಶವನ್ನು ಬಹಳ ಜನ ನಿರೀಕ್ಷೆ ಮಾಡಿದ್ರು ಆದರೆ ತಮಿಳುನಾಡಿನಲ್ಲಿ ಡಿಎಂಕೆ ಬರುತ್ತೆ ಅಂಥ ಮಾಧ್ಯಮಗಳಲ್ಲಿ ಬರುತ್ತಿತ್ತು, ಆದರೆ ಯಾರೂ ಸಹ ವಿಜಯ್ ಅವರ ಈಗೀನ ಸಾಧನೆಯನ್ನು ನಿರೀಕ್ಷೆ ಮಾಡಿರಲಿಲ್ಲ, ಅದೊಂದು ಮಾತ್ರ ಎಲ್ಲರಿಗೂ ಅಚ್ಚರಿ ಉಂಟು ಮಾಡಿದೆ ಎಂದರು.

ಶೃಂಗೇರಿ ಮರುಎಣಿಕೆ ಸಂಬಂಧ ಪ್ರತಿಕ್ರಿಯಿಸಿ, ಎಫ್ಐಆರ್ ಆಗಿದೆ, ರಾಜೇಗೌಡ್ರು ಚುನಾವಣೆ ಆಯೋಗಕ್ಕೆ ಮತ್ತೊಂದು ದೂರು ಕೊಟ್ಟಿದ್ದಾರೆ. ಏನೇನು ಬೆಳವಣಿಗೆ ಆಗುತ್ತೆ ಅಂಥ ಮುಂದೆ ನೋಡೋಣ. ಈಗಿನ ಪರಿಸ್ಥಿತಿಯಲ್ಲಿ ಓಟ್ ಚೋರಿ ಬಗ್ಗೆ ಚರ್ಚೆ ಮಾಡ್ತರಲ್ಲಾ ಅದಕ್ಕೆ ಯಾವುದೇ ಅರ್ಥ ಇಲ್ಲ. ಓಟ್ ಚೋರಿ ಬಗ್ಗೆ ಚರ್ಚೆ ಮಾಡುವ ನೈತಿಕತೆಯೂ ಇಲ್ಲ. ಕರ್ನಾಟಕದಲ್ಲಿ ಮುಂದಿನ ಚುನಾವಣೆಯಲ್ಲಿ ಬದಲಾವಣೆ ಆಗಬಹುದು ಎಂಬುದು ಜನಸಾಮಾನ್ಯರ ಚರ್ಚೆ ಇದೆ. ಕಾದು ನೋಡೋಣ ಏನೇನು ಆಗುತ್ತೆ ಅಂಥ ಮತ್ತು ಕರ್ನಾಟಕದಲ್ಲಿ ಪ್ರಾದೇಶಿಕ ಪಕ್ಷಗಳು ಸ್ವತಂತ್ರವಾಗಿ ಅಧಿಕಾರಕ್ಕೆ ಬರುವ ವಾತಾವರಣ ಇಲ್ಲ, ಇಲ್ಲಿಯ ರಾಜಕಾರಣಕ್ಕೂ, ಬೇರೆ ರಾಜ್ಯಗಳ ರಾಜಕಾರಣಕ್ಕೂ ಬಹಳಷ್ಟು ವ್ಯತ್ಯಾಸವಿದೆ ಎಂದರು.

ದೀದಿಯದ್ದು ಬಾಲಿಶ ಹೇಳಿಕೆ: ಇಡಿ, ಐಟಿ ದುರುಪಯೋಗ ಎಂಬ ಕಾಂಗ್ರೆಸ್ ಆರೋಪ ಸಂಬಂಧ ಕೇಳಿದ ಪ್ರಶ್ನೆಗೆ ಉತ್ತರಿಸಿ, ಅವರಿಗೆ ಬೇಕಾದಂತೆ ಕಾಂಗ್ರೆಸ್‌ನವರು ವ್ಯಾಖ್ಯಾನ ಮಾಡ್ತಾರೆ, ಅವರಿಗೆ ಬೇಕಾದಾಗ ಚೆನ್ನಾಗಿದೆ ಅಂತರೆ, ಸೋತಾಗ ಚೆನ್ನಾಗಿಲ್ಲ ಅಂತಾರೆ, ಪಶ್ಚಿಮ ಬಂಗಾಳದಲ್ಲಿ ಸ್ಪಷ್ಟ ಬಹುಮತ ಬಂದಿದೆ ಎಂದು ಎಲೆಕ್ಷನ್ ಕಮಿಷನ್‌ನಿಂದ ಘೋಷಣೆ ಆದ ಮೇಲೆ ಮುಗಿತು, ಮಮತಾ ಬ್ಯಾನರ್ಜಿಯವರು ರಾಜೀನಾಮೆ ಕೊಡಲ್ಲ ಎನ್ನುವುದು ಬಾಲಿಶವಾದ ಹೇಳಿಕೆ, ಆ ರೀತಿಯ ವಾತಾವರಣ ನಮ್ಮ ಸಂವಿಧಾನದಲ್ಲಿ ಇಲ್ಲ ಮದು ಮಮತಾ ಬ್ಯಾನರ್ಜಿ ವರ್ತನೆಗೆ ಬೇಸರ ವ್ಯಕ್ತಪಡಿಸಿದರು.

ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮ ವಿಚಾರದಲ್ಲಿ ಮಾತನಾಡಿ, ಯಡಿಯೂರಪ್ಪ ಅವರ ಐವತ್ತು ವರ್ಷದ ಸಾಧನೆ ಬಗ್ಗೆ, ರಾಜ್ಯಕ್ಕೆ ಕೊಟ್ಟಿರುವ ಕೊಡುಗೆ ಬಗ್ಗೆ ಬಿಜೆಪಿ ಪಕ್ಷದಿಂದ ಕಾರ್ಯಕ್ರಮ ನಡೀತಿದೆ ಮತ್ತು ಬೇರೆ ಕಾರ್ಯಕ್ರಮ ಇರುವುದರಿಂದ ಹೋಗ್ತಾ ಇಲ್ಲ ಎಂದು ತಿಳಿಸಿದರು.

ಬೂವನಹಳ್ಳಿಯ ಜಾತ್ರಾ ಮಹೋತ್ಸವಕ್ಕೆ ಎಚ್ಡಿಕೆ ಚಾಲನೆ

ಚನ್ನಕೇಶವಸ್ವಾಮಿ, ದೇವಿರಮ್ಮ ಹಾಗೂ ಲಕ್ಷ್ಮೀದೇವಿ ದೇಗುಲಗಳಿಗೆ ಭೇಟಿ ನೀಡಿದ ಕೇಂದ್ರ ಸಚಿವ

• **ಕನ್ನಡಪ್ರಭ ವಾರ್ತೆ** ಹಾಸನ

ನಗರದ ಸಮೀಪದ ಬೂವನಹಳ್ಳಿಯಲ್ಲಿ ಮೂರು ದಿನಗಳ ಕಾಲ ನಡೆಯುವ ಶ್ರೀ ದೇವಿರಮ್ಮ ದೇವಿ ರಥೋತ್ಸವ ಹಾಗೂ ಜಾತ್ರಾ ಮಹೋತ್ಸವಕ್ಕೆ ಕೇಂದ್ರ ಸಚಿವ ಎಚ್. ಡಿ ಕುಮಾರಸ್ವಾಮಿ ಅವರು ಶುಕ್ರವಾರ ಅಧಿಕೃತ ಚಾಲನೆ ನೀಡಿದರು.

ಈ ವೇಳೆ ಗ್ರಾಮದ ಚನ್ನಕೇಶವಸ್ವಾಮಿ, ದೇವಿರಮ್ಮ ಹಾಗೂ ಲಕ್ಷ್ಮೀದೇವಿ ದೇಗುಲಗಳಿಗೆ ಭೇಟಿ ನೀಡಿದ ಅವರು, ವಿಶೇಷ ಪೂಜೆ ಸಲ್ಲಿಸಿ ಜಾತ್ರೆಯ ಸಂಭ್ರಮದಲ್ಲಿ ಭಾಗಿಯಾಗಿದ್ದ ನೂರಾರು ಭಕ್ತರ ನಡುವೆ ದೇವರ ಆಶೀರ್ವಾದ ಪಡೆದರು. ಕುಮಾರಸ್ವಾಮಿ ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ಗ್ರಾಮಸ್ಥರು ಹಾಗೂ ಕಾರ್ಯಕರ್ತರು ಪಟಾಕಿ ಸಿಡಿಸಿ, ಜಯಘೋಷಗಳ ಮೂಲಕ ಅದ್ಧೂರಿಯಾಗಿ ಸ್ವಾಗತಿಸಿದರು. ದೇಗುಲಗಳ ಭೇಟಿಯ ನಂತರ ದೇವಾಲಯದ ಆವರಣದಲ್ಲಿ ಸಾವಿರಾರು ಗ್ರಾಮಸ್ಥರ ಸಮ್ಮುಖದಲ್ಲಿ ಗ್ರಾಮದ ವತಿಯಿಂದ ಕುಮಾರಸ್ವಾಮಿವರನ್ನು ಸನ್ಮಾನಿಸಿ ಗೌರವಿಸಲಾಯಿತು. ಇದೇ ವೇಳೆ ಇತ್ತೀಚೆಗೆ ಸಿಎಂ ಪದಕ ಪಡೆದ ಅರಣ್ಯ ಇಲಾಖೆ ಸಿಬ್ಬಂದಿ ಸುಭಾಷ್ ಅವರನ್ನು ಕುಮಾರಸ್ವಾಮಿ ಸನ್ಮಾನಿಸಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮವಾಗಿ ಕರ್ತವ್ಯ ನಿರ್ವಹಿಸುವಂತೆ ಸಲಹೆ ನೀಡಿದರು.

ನಂತರ ಕೇಂದ್ರ ಸಚಿವರು ಮಾಧ್ಯಮದೊಂದಿಗೆ ಮಾತನಾಡಿ, ಜಿಲ್ಲೆಯ ಪ್ರಮುಖವಾದ ದೇವರು ಶ್ರೀ ಚನ್ನಕೇಶವಸ್ವಾಮಿ, ದೇವಿರಮ್ಮ ತಾಯಿಯ ಜಾತ್ರಾ ಮಹೋತ್ಸದ ಕಾರ್ಯಕ್ರಮಕ್ಕೆ ಇಲ್ಲಿ ಸುತ್ತಮುತ್ತಲ ಗ್ರಾಮಗಳ ಭಕ್ತಾದಿಗಳ ಸಮ್ಮುಖದಲ್ಲಿ ನಡೆಯುತ್ತಿದೆ. ಈ ದೇವರ ಆಶೀರ್ವಾದ ನಾಡಿನ ಜನತೆ ಮೇಲೆ ಸಂಪೂರ್ಣ ಅನುಗ್ರಹ ಕುರುಣಿಸಲಿ ಎಂದು ಪ್ರಾರ್ಥಿಸಿರುವುದಾಗಿ ಹೇಳಿದರು.

ರಾಜ್ಯದಲ್ಲಿ ನಡೆದ ಉಪಚುನಾವಣೆಯ ಫಲಿತಾಂಶವು ಮುಂದಿನ ಚುನಾವಣೆಗೂ ಈ ಉಪಚುನಾವಣೆಗೂ ಯಾವ ಸಂಬಂಧವಿಲ್ಲ. ಮುಂಬರುವ ಯಾವುದೇ ಚುನಾವಣೆಯ ಮೇಲೂ ಪರಿಣಾಮ ಬೀರುವುದಿಲ್ಲ. ಹಿಂದೆ ಹಲವಾರು ಬಾರಿ ನೋಡಿದ್ದೀರಿ, ಸರಕಾರದ ಪರವಾಗಿ ಉಪ ಚುನಾವಣೆಗಳಲ್ಲಿ ಫಲಿತಾಂಶ ಬಂದರೂ ನಂತರ ನಡೆದ ಚುನಾವಣೆಯಲ್ಲಿ ಸರಕಾರಗಳು ಪತನವಾಗಿದೆ. ಆದ್ದರಿಂದ ಈ ಉಪ ಚುನಾವಣೆ ಬಗ್ಗೆ ಹೆಚ್ಚಿನ ಮಹತ್ವ ಕೊಡಬೇಕಾಗಿಲ್ಲ ಎಂಬುದು ನನ್ನ ಅಭಿಪ್ರಾಯ ಎಂದರು. ಜಿಪಂ ಹಾಗೂ ತಾಪಂ ಚುನಾವಣೆ ಬಗ್ಗೆ ಎಲ್ಲಾ ಪಕ್ಷದಲ್ಲು ಸಿದ್ಧತೆ ನಡೆದಂತೆ ನಮ್ ಪಕ್ಷದಿಂದಲೂ ನಡೆಯುತ್ತಿದೆ. ಪಕ್ಷ ಸಂಪೂರ್ಣ ಸಜ್ಜಾಗಿದ್ದು, ಕಾರ್ಯಕರ್ತರು ಸ್ಥಳೀಯ ಮಟ್ಟದಲ್ಲಿ ಪಕ್ಷದ ಸಂಘಟನೆ ಬಲಪಡಿಸುವ ಕಾರ್ಯದಲ್ಲಿ ತೊಡಗಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಸ್ವರೂಪ್ ಪ್ರಕಾಶ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಸ್ವಾಮಿಗೌಡ, ತಹಸೀಲ್ದಾರ್ ಗೀತಾ, ತಾಪಂ ಮಾಜಿ ಸದಸ್ಯ ಜಯರಾಂ, ಬೂವನಹಳ್ಳಿ ಕೃಷಿಪತ್ತಿನ ಸಹಕಾರ ಸಂಘದ ಅಧ್ಯಕ್ಷ ಬಿ.ಆರ್ ಬೊಮ್ಮೇಗೌಡ ಸೇರಿದಂತೆ ಶಿವರಾಮೇಗೌಡ, ಹರೀಶ್, ಮಂಜುನಾಥ್, ರವಿ, ದುರ್ಗಾಪ್ರಸಾದ್, ಸ್ವಾಮಿ, ಮಲ್ಲೇಶ್, ಕರಿಯಯ್ಯ, ಲಕ್ಷ್ಮಣ್ ಹಾಗೂ ಇತರರು ಉಪಸ್ಥಿತರಿದ್ದರು.

ಇಂದು ರಥೋತ್ಸವ: ಮೇ 9ರಂದು ಮುಂಜಾನೆ 3 ಗಂಟೆಗೆ ಬಾಯಿ ಬೀಗಸೇವೆ ಆರಂಭವಾಗಲಿದೆ. ಬೆಳಗ್ಗೆ 8.30ಕ್ಕೆ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಹಾಗೂ ಗಣ್ಯರು, ಗ್ರಾಮಸ್ಥರ ಸಮ್ಮುಖದಲ್ಲಿ ದೇವಿರಮ್ಮ ರಥೋತ್ಸವಕ್ಕೆ ಚಾಲನೆ ದೊರೆಯಲಿದೆ. ಮಧ್ಯಾಹ್ನ 12ಕ್ಕೆ ಮಹಾ ಮಂಗಳಾರತಿ, 12.30ಕ್ಕೆ ಪ್ರಸಾದ ವಿನಿಯೋಗ ಕಾರ್ಯಕ್ರಮವಿದೆ. ಸಂಜೆ 7.30ರಿಂದ ಆರ್ಕೆಸ್ಟ್ರಾ ಇರಲಿದೆ. ಉತ್ಸವದ ಉದ್ಘಾಟನೆಯನ್ನು ಶ್ರೀ ಶಂಭುನಾಥ ಸ್ವಾಮೀಜಿ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಪ್ರಧಾನಿ ಎಚ್. ಡಿ. ದೇವೇಗೌಡರು, ಅವರ ಪತ್ನಿ ಚನ್ನಮ್ಮ, ಸ್ಥಳೀಯ ಶಾಸಕ ಎಚ್. ಪಿ.ಸ್ವರೂಪ್ ಪ್ರಕಾಶ್, ಸಂಸದ ಶ್ರೇಯಸ್ ಪಟೇಲ್, ಮಾಜಿ ಸಚಿವ ಎಚ್.ಡಿ.ರೇವಣ್ಣ, ಜಿಪಂ ಮಾಜಿ ಸದಸ್ಯೆ ಭವಾನಿ ರೇವಣ್ಣ, ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ, ಮಾಜಿ ಶಾಸಕರಾದ ಪ್ರೀತಂ ಜೆ.ಗೌಡ, ಬಿ.ವಿ.ಕರೀಗೌಡ, ಹಾಸನ ಜಿಪಂ ಮಾಜಿ ಅಧ್ಯಕ್ಷ ಸ್ವಾಮಿಗೌಡ, ತಾಪಂ ಮಾಜಿ ಸದಸ್ಯ ಬಿ.ಈ.ಜಯರಾಂ ಮೊದಲಾದವರು ಭಾಗಿಯಾಗುವರು. ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಎಸ್ಪಿ ಶುಭಾನ್ವಿತಾ ಸೇರಿದಂತೆ ಎಲ್ಲ ಅಧಿಕಾರಿಗಳು ಭಾಗಿಯಾಗಲಿದ್ದಾರೆ.



ಬೂವನಹಳ್ಳಿ ಜಾತ್ರೋತ್ಸವಕ್ಕೆ ಎಚ್. ಡಿ. ಕುಮಾರಸ್ವಾಮಿ ಚಾಲನೆ ನೀಡಿದರು.

ಬೆಳವಾಡಿಯಲ್ಲಿ ಡಾ. ಅಂಬೇಡ್ಕರ್ ಪುತ್ಥಳಿ ಅನಾವರಣ ಕಾರ್ಯಕ್ರಮ

ಅರಕಲಗೂಡು: ಭಾರತ ಸಂವಿಧಾನ ಇಡೀ ವಿಶ್ವದಲ್ಲಿ ಶ್ರೇಷ್ಠ ಸಂವಿಧಾನ. ಅಂತಹ ಸಂವಿಧಾನ ನೀಡಿದಂತಹ ಡಾ. ಬಿ.ಆರ್. ಅಂಬೇಡ್ಕರ್ ಅವರ ಆದರ್ಶ ತತ್ವಗಳನ್ನು ಅನುಸರಿಸಿ ಮಕ್ಕಳು ಉತ್ತಮ ವಿದ್ಯಾಭ್ಯಾಸ ಪಡೆದು ತಮ್ಮ ಮುಂದಿನ ಜೀವನ ರೂಪಿಸಿಕೊಳ್ಳುವಂತೆ ಶಾಸಕ ಎ.ಮಂಜು ಮನವಿ ಮಾಡಿದರು.

ದೊಡ್ಡಮಗ್ಗೆ ಹೋಬಳಿ ಬೆಳವಾಡಿ ಗ್ರಾಮದಲ್ಲಿ ನಡೆದ ಡಾ. ಬಿಆರ್ ಅಂಬೇಡ್ಕರ್ ಜಯಂತಿ ಹಾಗೂ ಅಂಬೇಡ್ಕರ್‌ರವರ ಪುತ್ಥಳಿ ಅನಾವರಣ ಕಾರ್ಯಕ್ರಮದಲ್ಲಿ ಪುತ್ಥಳಿ ಅನಾವರಣಗೊಳಿಸಿ ಮಾತನಾಡಿದರು. ಶಿಕ್ಷಣ, ಸಂಘಟನೆ, ಹೋರಾಟ ಈ ಮೂರು ಮಂತ್ರಗಳ ಮೂಲಕ ಒಬ್ಬ ಸಾಮಾನ್ಯ ವ್ಯಕ್ತಿ ದೇಶಕ್ಕೆ ಅಗತ್ಯವಿರುವ ದೊಡ್ಡ ಲಿಖಿತ ಸಂವಿಧಾನವನ್ನು ನೀಡಿ ನೆಮ್ಮದಿಯಿಂದ ಸರ್ವರೂ ಸಮಾನತೆಯಿಂದ ಬದುಕುವ ಹಕ್ಕನ್ನು ನೀಡಿದ ಮಹಾನ್ ಚೇತನ ಡಾ. ಬಿ ಆರ್ ಅಂಬೇಡ್ಕರ್ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ ಚನ್ನಕೇಶವ, ಮುಖ್ಯ ಭಾಷಣಕಾರ ರತ್ನಾಕರ್, ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘ ಅಧ್ಯಕ್ಷ ಜಯಣ್ಣ, ಜಿಲ್ಲಾ ಸಂಚಾಲಕ ಕೃಷ್ಣ ದುಮ್ಮಿ, ಜಿ.ಪಂ. ಮಾಜಿ ಸದಸ್ಯ ಬಿ.ಎಂ. ರವಿ, ವಿಷ್ಣು ಪ್ರಕಾಶ್, ಬೆಳವಾಡಿ ಗ್ರಾಮದ ಹಿರಿಯ ಮುಖಂಡರು, ಅಂಬೇಡ್ಕರ್ ಯುವಕ ಸಂಘದ ಪದಾಧಿಕಾರಿಗಳು ಮಹಿಳಾ ಪದಾಧಿಕಾರಿಗಳು, ದಲಿತ ಮುಖಂಡರು ಭಾಗವಹಿಸಿದ್ದರು.

ಕಾಫಿ ಕ್ಷೇತ್ರ ಬೆಳೆಸಲು ಸಂಘಟನೆಗಳು-ಸರ್ಕಾರ ಒಟ್ಟಾಗಿ ಕಾರ್ಯನಿರ್ವಹಿಸಬೇಕು

ಕಾಫಿ ಬೆಳೆಗಾರರ ಸಂಘದ ಕಟ್ಟಡಕ್ಕೆ ಶಾಸಕ ಮಂಜು ಭೂಮಿಪೂಜೆ



• **ಕನ್ನಡಪ್ರಭ ವಾರ್ತೆ** ಸಕಲೇಶಪುರ

ಕಾಫಿ ಬೆಳೆಗಾರರ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಬೆಳಗೋಡು ಹೋಬಳಿ ಕಾಫಿ ಬೆಳೆಗಾರರ ಸಂಘದ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗೆ ಶಾಸಕ ಸಿಮೆಂಟ್ ಮಂಜು ಭೂಮಿಪೂಜೆ ನೆರವೇರಿಸಿದರು.

ಬಳಿಕ ನಡೆದ ಸಂಘದ ವಾರ್ಷಿಕ ಮಹಾಸಭೆಯಲ್ಲಿ ಬೆಳೆಗಾರರು, ಪದಾಧಿಕಾರಿಗಳು ಹಾಗೂ ಗಣ್ಯರು ಭಾಗವಹಿಸಿ ಕಾಫಿ ಕ್ಷೇತ್ರದ ಸಮಸ್ಯೆಗಳು, ಬೆಳೆಗಾರರ ಸವಾಲುಗಳು ಹಾಗೂ ಸಂಘದ ಮುಂದಿನ ಕಾರ್ಯಚಟುವಟಿಕೆಗಳ ಕುರಿತು ಚರ್ಚೆ ನಡೆಸಿದರು. ಕಾರ್ಯಕ್ರಮದಲ್ಲಿ ಶಾಸಕ ಸಿಮೆಂಟ್ ಮಂಜು ಮಾತನಾಡಿ, ಕಾಫಿ ಬೆಳೆಗಾರರ ಸಂಘಗಳು ಕೇವಲ ಸಂಘಟನಾ ಚಟುವಟಿಕೆಗಳಿಗೆ ಸೀಮಿತವಾಗದೆ ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಬಲವಾದ ವೇದಿಕೆಯಾಗಬೇಕು. ಸರ್ಕಾರದ ಯೋಜನೆಗಳು ಹಾಗೂ ಸೌಲಭ್ಯ ಗ್ರಾಮೀಣ ಬೆಳೆಗಾರರಿಗೆ ತಲುಪಿಸುವಲ್ಲಿ ಸಂಘಗಳು ಸೇತುವೆಯಾಗಿ ಕಾರ್ಯ ನಿರ್ವಹಿಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು. ನೂತನ ಕಟ್ಟಡ ನಿರ್ಮಾಣದಿಂದ ಸಂಘದ ಚಟುವಟಿಕೆಗಳಿಗೆ ಇನ್ನಷ್ಟು ಬಲ ಸಿಗಲಿದ್ದು, ರೈತರ ಸಭೆಗಳು, ತರಬೇತಿ ಕಾರ್ಯಕ್ರಮಗಳು, ಕೃಷಿ ಮಾರ್ಗದರ್ಶನ ಶಿಬಿರಗಳು ಹಾಗೂ ವಿವಿಧ ಚರ್ಚಾ ಸಭೆಗಳನ್ನು ಹಮ್ಮಿಕೊಳ್ಳಲು ಹೆಚ್ಚಿನ ಅನುಕೂಲವಾಗಲಿದೆ ಎಂದು ಹೇಳಿದರು. ಕಟ್ಟಡವು ಬೆಳೆಗಾರರ ಒಗ್ಗಟ್ಟಿನ ಪ್ರತೀಕವಾಗಿದ್ದು, ಭವಿಷ್ಯದಲ್ಲಿ ಸಂಘವನ್ನು ಇನ್ನಷ್ಟು ಅಭಿವೃದ್ಧಿಪಡಿಸಲು ಎಲ್ಲರೂ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ವಾರ್ಷಿಕ ಮಹಾಸಭೆಯಲ್ಲಿ ಕಾಫಿ ಬೆಳೆಗಾರರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಕುರಿತು ಚರ್ಚೆ ನಡೆಯಿತು. ಕಾಫಿ ಬೆಲೆ ಸ್ಥಿರತೆ, ಕಾರ್ಮಿಕ ಸಮಸ್ಯೆ, ಅರಣ್ಯ ಪ್ರದೇಶದ ಅಂಚಿನ ತೋಟಗಳಲ್ಲಿ ಕಾಡಾನೆ ಹಾವಳಿ, ಮಳೆ ಹಾನಿಗೆ ಪರಿಹಾರ, ಸರ್ಕಾರದ ಯೋಜನೆಗಳ ಮಾಹಿತಿ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸೇರಿದಂತೆ ಹಲವು ವಿಷಯಗಳ ಬಗ್ಗೆ ಬೆಳೆಗಾರರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಸರ್ಕಾರ ಕಾಫಿ ಬೆಳೆಗಾರರ ಪರ ವಿಶೇಷ ಯೋಜನೆಗಳನ್ನು ಜಾರಿಗೆ ತರಬೇಕು ಹಾಗೂ ಸಂಕಷ್ಟದಲ್ಲಿರುವ ರೈತರಿಗೆ ಆರ್ಥಿಕ ನೆರವು ನೀಡಬೇಕು ಎಂಬ ಒತ್ತಾಯ ಕೇಳಿಬಂದಿತು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷರು, ಕಾರ್ಯದರ್ಶಿಗಳು, ನಿರ್ದೇಶಕರು ಹಾಗೂ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ನೂರಾರು ಕಾಫಿ ಬೆಳೆಗಾರರು ಭಾಗವಹಿಸಿದ್ದರು.

ಕ್ರೀಡೆಗೆ ಪ್ರೋತ್ಸಾಹ | 2 ದಿನಗಳ ಕಾಲ ಆಯೋಜನೆ | ಹಳ್ಳಿಕಾರ್ ತಳಿ ಸಂರಕ್ಷಣೆಗೂ ಜಾನಪದ ಕ್ರೀಡೆಗೂ ಉತ್ತೇಜನ

ಬಾಣಾವರದಲ್ಲಿ ರಾಜ್ಯ ಮಟ್ಟದ ಜೋಡೆತ್ತಿನ ಗಾಡಿ ಓಟ ಸ್ಪರ್ಧೆ

• **ಕನ್ನಡಪ್ರಭ ವಾರ್ತೆ** ಅರಸೀಕೆರೆ

ತಾಲೂಕಿನ ಬಾಣಾವರದಲ್ಲಿ ಹಳ್ಳಿಕಾರ್ ಗೋತಳಿಯ ಸಂರಕ್ಷಣೆ ಹಾಗೂ ಗ್ರಾಮೀಣ ಜಾನಪದ ಕ್ರೀಡೆಗಳ ಉತ್ತೇಜನದ ಉದ್ದೇಶದಿಂದ ಹಳ್ಳಿಕಾರ್ ಬ್ರಿಗೇಡ್ ಹಾಗೂ ಕೋಟೆ ಆಂಜನೇಯ ಸ್ವಾಮಿ ಹಳ್ಳಿಕಾರ್ ಗೋತಳಿ ಪ್ರೇಮಿಗಳ ಸಂಘದ ವತಿಯಿಂದ ಮೇ 9 ಮತ್ತು 10ರಂದು ರಾಜ್ಯ ಮಟ್ಟದ ಜೋಡಿ ಎತ್ತಿನ ಗಾಡಿ ಓಟ ಸ್ಪರ್ಧೆಯನ್ನು ಅದ್ಧೂರಿಯಾಗಿ ಆಯೋಜಿಸಲಾಗಿದೆ. ಈ ಕುರಿತು ಮಾಹಿತಿ ನೀಡಿದ ಸಂಘದ ಪದಾಧಿಕಾರಿಗಳು, ರಾಜ್ಯದ ವಿವಿಧ ಭಾಗಗಳಿಂದ ನೂರಾರು ಸ್ಪರ್ಧಾಳುಗಳು ಭಾಗವಹಿಸುವ ನಿರೀಕ್ಷೆ ಇದ್ದು, ಸ್ಪರ್ಧೆಯನ್ನು ಅತ್ಯಂತ ಶಿಸ್ತುಬದ್ಧ ಹಾಗೂ ಪಾರದರ್ಶಕವಾಗಿ ನಡೆಸಲು ಎಲ್ಲಾ ಸಿದ್ಧತೆಗಳನ್ನು ಮಾಡಲಾಗಿದೆ ಎಂದು ತಿಳಿಸಿದರು.

ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಾಳುಗಳಿಗೆ 3,500 ರು. ಪ್ರವೇಶ ಶುಲ್ಕ ನಿಗದಿಪಡಿಸಲಾಗಿದ್ದು, ವಿಜೇತರಿಗೆ ಆಕರ್ಷಕ ಬಹುಮಾನಗಳನ್ನು ಘೋಷಿಸಲಾಗಿದೆ. ಪ್ರಥಮ ಬಹುಮಾನವಾಗಿ 1,11,111 ರು. ದ್ವಿತೀಯ ಬಹುಮಾನ 71,111ರು. ತೃತೀಯ ಬಹುಮಾನ 51,111 ರು. ನಾಲ್ಕನೇ ಸ್ಥಾನಕ್ಕೆ 31,111 ಹಾಗೂ ಐದನೇ ಬಹುಮಾನ 11,111 ರು. ನಿಗದಿಪಡಿಸಲಾಗಿದೆ.

ಸ್ಪರ್ಧೆಗೆ ಕೆಲವು ಕಟ್ಟುನಿಟ್ಟಿನ ನಿಯಮಾವಳಿಗಳನ್ನು ಜಾರಿಗೊಳಿಸಲಾಗಿದ್ದು, ಶುದ್ಧ ಹಳ್ಳಿಕಾರ್ ತಳಿಯ ಕಸಿರಾಸುಗಳಿಗೆ ಮಾತ್ರ ಅವಕಾಶ ನೀಡಲಾಗಿದೆ. ಜೋಡಿ ಹಳ್ಳಿಕಾರ್ ಎತ್ತುಗಳು ಅಥವಾ ಒಂದು ಹಳ್ಳಿಕಾರ್ ಹಾಗೂ ಒಂದು ಕಿಲಾರಿ ಎತ್ತಿನ ಜೋಡಿಗೆ ಮಾತ್ರ ಪ್ರವೇಶ ಇರಲಿದೆ. ಜಂಟಿ ಗೂಳಿ ಹಾಗೂ ಜೋಡಿ ಕಿಲಾರಿ ಎತ್ತುಗಳಿಗೆ ಅವಕಾಶ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಒಂದು ಗಾಡಿಗೆ ಗರಿಷ್ಠ ಎಂಟು ಜನರಿಗೆ ಮಾತ್ರ ಅವಕಾಶವಿದ್ದು, ಸ್ಪರ್ಧೆಯಲ್ಲಿ ಸೆನ್ಸಾರ್ ವ್ಯವಸ್ಥೆ ಅಳವಡಿಸಲಾಗುತ್ತದೆ. ತೀರ್ಪುಗಾರರ ನಿರ್ಧಾರವೇ ಅಂತಿಮವಾಗಿದ್ದು, ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದಂತೆ ಸೂಕ್ತ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದರು.

ಈ ಜಾನಪದ ಕ್ರೀಡಾಕೂಟವನ್ನು ವೀಕ್ಷಿಸಲು ಹಾಗೂ ರೈತರನ್ನು ಉತ್ತೇಜಿಸಲು ಶಾಸಕ ಶಿವಲಿಂಗೇಗೌಡ, ಹಾಸನ ಲೋಕಸಭಾ ಸದಸ್ಯ ಶ್ರೇಯಸ್ ಪಟೇಲ್, ಕನ್ನಡ ಚಿತ್ರರಂಗದ ನಟ ಧ್ರುವ ಸರ್ಜಾ, ಹಾಸ್ಯ ಕಲಾವಿದ ಧರ್ಮಣ್ಣ, ಅಂತಾರಾಷ್ಟ್ರೀಯ ದೇಹದಾರ್ಢ್ಯ ಪಟು ಚೇತನ್ ಕೊಡಪ್ಪ, ಮಿಮಿಕ್ರಿ ಕಲಾವಿದ ಪ್ರವೀಣ್ ಕೆಂಪೇಗೌಡ ಸೇರಿದಂತೆ ಹಲವು ಗಣ್ಯರು ಭಾಗವಹಿಸುವ ಸಾಧ್ಯತೆ ಇದೆ ಎಂದು ತಿಳಿಸಿದರು.

ರಾಜ್ಯದ ನಾನಾ ಭಾಗಗಳಿಂದ ಸಾವಿರಾರು ರೈತರು, ಹಳ್ಳಿಕಾರ್ ತಳಿ ಅಭಿಮಾನಿಗಳು ಹಾಗೂ ಜಾನಪದ ಕ್ರೀಡೆ ಪ್ರೇಮಿಗಳು ಆಗಮಿಸುವ ನಿರೀಕ್ಷೆ ಇದ್ದು, ಸ್ಪರ್ಧೆಯನ್ನು ಯಶಸ್ವಿಗೊಳಿಸಲು ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು.

ಹೆಚ್ಚಿನ ಮಾಹಿತಿಗಾಗಿ ಸಂಘದ ಪದಾಧಿಕಾರಿಗಳಾದ ಅಜಯ್ ಕುಮಾರ್, ಶರತ್, ಗುರುಪೇಟೆ, ಮಂಜು, ಸಂತು, ಮೋಹನ್, ದೀಪು, ರಾಕಿ ಹಾಗೂ ವಿಜಯ್ ಅವರನ್ನು ಸಂಪರ್ಕಿಸಿ ಹೆಸರು ನೋಂದಾಯಿಸಿಕೊಳ್ಳಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಅರಸೀಕೆರೆಯ ಬಾಣಾವರದಲ್ಲಿ ಇಂದಿನಿಂದ ರಾಜ್ಯ ಮಟ್ಟದ ಜೋಡೆತ್ತಿನ ಗಾಡಿ ಓಟ ಸ್ಪರ್ಧೆ ನಡೆಯಲಿದ್ದು, ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ.

ಸಂಬಳ ಹೆಚ್ಚಳ, ಹಾಜರಾತಿ ಬೋನಸ್‌ಗೆ ಆಗ್ರಹ

ಕೆಲಸ ಸ್ಥಗಿತಗೊಳಿಸಿ ಶಾಹಿ ಕಂಪನಿ ಎದುರು ಕಾರ್ಮಿಕರ ದಿಢೀರ್ ಪ್ರತಿಭಟನೆ | ಸಂಬಳ ಹೆಚ್ಚಿಸಿಲ್ಲ ಎಂದು ಆಕ್ರೋಶ

• **ಕನ್ನಡಪ್ರಭ ವಾರ್ತೆ** ಹಾಸನ

ಸಂಬಳ ಹೆಚ್ಚಳ, ಹಾಜರಾತಿ ಬೋನಸ್ ಹಾಗೂ ಮೂಲಭೂತಕಾರ್ಮಿಕಸೌಲಭ್ಯಗಳನ್ನುಒದಗಿಸುವಂತೆ ಆಗ್ರಹಿಸಿ ನಗರದ ಹೊರವಲಯದ ಹೊಳೆನರಸೀಪುರ ರಸ್ತೆಯಲ್ಲಿರುವ ಶಾಹಿ (ಎ.ಚ್.ಪಿ. ಅಪಾರಲ್ ಪ್ರೈವೇಟ್ ಲಿಮಿಟೆಡ್) ಗಾರ್ಮೆಂಟ್ಸ್ ಕಾರ್ಮಿಕರು ಶುಕ್ರವಾರ ಬೆಳಗ್ಗೆ ದಿಢೀರ್ ಪ್ರತಿಭಟನೆ ನಡೆಸಿದರು.

ಹಲವುವರ್ಷಗಳಿಂದಕೆಲಸನಿರ್ವಹಿಸುತ್ತಿರುವ ಕಾರ್ಮಿಕರಿಗೆಸಮರ್ಪಕವೇತನನೀಡದೆನಿರ್ಲಕ್ಷ್ಯ ವಹಿಸಲಾಗುತ್ತಿದೆಎಂದುಆರೋಪಿಸಿ,ಕಾರ್ಮಿಕರು ಕೆಲಸಸ್ಥಗಿತಗೊಳಿಸಿ ಕಂಪನಿ ಎದುರು ಜಮಾಯಿಸಿ ಆಕ್ರೋಶ ಹೊರಹಾಕಿದರು. ಬೆಳಗ್ಗೆ ಕಂಪನಿಗೆ ಕೆಲಸಕ್ಕೆ ಆಗಮಿಸಿದ ನೂರಾರು ಕಾರ್ಮಿಕರು ಏಕಾಏಕಿ ಕೆಲಸ ನಿಲ್ಲಿಸಿ, ಕಂಪನಿ ಆಡಳಿತ ಮಂಡಳಿಯ ವಿರುದ್ಧಘೋಷಣೆಕೂಗಿಪ್ರತಿಭಟನೆನಡೆಸಿದರು. ಸಂಬಳ ಹೆಚ್ಚಳ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು. ಪ್ರತಿಭಟನೆಯಿಂದಕೆಲಕಾಲಕಂಪನಿಯಕಾರ್ಯಚಟುವಟಿಕೆ ಅಸ್ತವ್ಯಸ್ತಗೊಂಡಿದ್ದು, ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು.

ಕಂಪನಿ ಕಾರ್ಮಿಕ ಕುಮಾರ್ ಮಾಧ್ಯಮದೊಂದಿಗೆ ಮಾತನಾಡಿ, ಈ ಕಂಪನಿಯಲ್ಲಿ ನೂರಾರು ಜನಕಾರ್ಮಿಕರುದುಡಿಯುತ್ತಿದ್ದಾರೆ. ಸ್ಥಳೀಯರು ಮಾತ್ರವಲ್ಲದೆ ಹೊರ ಜಿಲ್ಲೆಗಳಿಂದ ಬಂದವರೂ ಇಲ್ಲಿ ಕೆಲಸ ಮಾಡುತ್ತಿದ್ದಾರೆ, ಆದರೆ ಕಾರ್ಮಿಕರ ಶ್ರಮಕ್ಕೆ ತಕ್ಕ ಗೌರವ ಸಿಗುತ್ತಿಲ್ಲ. ಕಳೆದ ಐದು ವರ್ಷಗಳಿಂದ ಸಂಬಳ ಹೆಚ್ಚಳ ಮಾಡುತ್ತೇವೆ ಎಂದು ಭರವಸೆ ನೀಡುತ್ತಲೇ ಬಂದಿದ್ದಾರೆ. ಆದರೆ ಇಂದಿಗೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ಈಗ ಹೊಸದಾಗಿ ಕೆಲಸಕ್ಕೆ ಸೇರುವವರಿಗೆ ₹17 ಸಾವಿರದವರೆಗೆ ಸಂಬಳ ನೀಡಲಾಗುತ್ತಿದೆ. ಆದರೆ 5ರಿಂದ 8 ವರ್ಷಗಳಿಂದ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಹಳೆಯ ಕಾರ್ಮಿಕರಿಗೆ ಕೇವಲ ₹12,500ರಿಂದ ₹13 ಸಾವಿರಮಾತ್ರ ನೀಡಲಾಗುತ್ತಿದೆ. ಅನುಭವ ಹೊಂದಿದ ಕಾರ್ಮಿಕರನ್ನೇ ಕಡೆಗಣಿಸಲಾಗುತ್ತಿದೆ, ಇದರಿಂದ ನಮ್ಮ ಜೀವನ ನಡೆಸುವುದು ತುಂಬಾ ಕಷ್ಟವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಕಂಪನಿಯಲ್ಲಿಕಾರ್ಮಿಕರಿಗೆಸರಿಯಾದತಿಂಡಿ-ಊಟದ ವ್ಯವಸ್ಥೆಯೇ ಇಲ್ಲ, ಕುಡಿಯುವ ನೀರು, ವಿಶ್ರಾಂತಿ ಕೊಠಡಿ ಸೇರಿದಂತೆ ಮೂಲಭೂತ ಸೌಲಭ್ಯಗಳ ಕೊರತೆ ಇದೆ. ಬೇಡಿಕೆಗಳ ಬಗ್ಗೆ ಪ್ರಶ್ನಿಸಿದರೆ 'ಇಂದು, ನಾಳೆ ಮಾಡುತ್ತೇವೆ' ಎಂದು ಹೇಳಿಕಾಲಹರಣಮಾಡುತ್ತಾರೆ.ಆದರೆಯಾವುದೇ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡಿಲ್ಲ ಎಂದು ಆರೋಪಿಸಿದರು.

ಇನ್ನೂ ರಾತ್ರಿ ಪಾಳಿಯಲ್ಲಿ ಹೆಚ್ಚುವರಿ ಸಮಯ ಕೆಲಸಮಾಡಿದರೂಅಲ್ಪಪ್ರಮಾಣದಹಣಮಾತ್ರ ನೀಡಲಾಗುತ್ತಿದೆ ಎಂದು ದೂರಿದ ಅವರು, ಹೆಚ್ಚುವರಿ ಸಮಯ ದುಡಿದರೂ ಕೇವಲ ₹100 ನೀಡುತ್ತಾರೆ.ಹಾಜರಾತಿಬೋನಸ್‌ನೀಡುವುದಾಗಿ ಹೇಳಿ ಇದುವರೆಗೂ ಕೊಟ್ಟಿಲ್ಲ, ಮ್ಯಾನೇಜ್ಮೆಂಟ್ ಹಾಗೂ ಮೇಲಾಧಿಕಾರಿಗಳಿಂದ ಆದೇಶ ಬರಬೇಕೆಂದು ಹೇಳಿ ತಪ್ಪಿಸಿಕೊಳ್ಳುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ನಮ್ಮ ನ್ಯಾಯಯುತ ಬೇಡಿಕೆಗಳಿಗಾಗಿ ಹೋರಾಟಕ್ಕೆ ಇಳಿದಿದ್ದೇವೆ ಎಂದು ತಮ್ಮ ಅಳಲು ತೋಡಿಕೊಂಡರು.

ಮತ್ತೊಬ್ಬ ಕಾರ್ಮಿಕರಾದ ಜಯಮ್ಮ ಮಾತನಾಡಿ, ನಾನು ಕಳೆದ ಏಳು ವರ್ಷಗಳಿಂದ ಹೌಸ್ ಕೀಪಿಂಗ್ ಕೆಲಸ ಮಾಡುತ್ತಿದ್ದೇನೆ. ಈ ಹಿಂದೆ ದಿನಕ್ಕೆ ₹600 ನೀಡುತ್ತಿದ್ದರು. ಈಗ ಅದನ್ನು ಕಡಿಮೆ ಮಾಡಿ ಕೇವಲ ₹400 ನೀಡುತ್ತಿದ್ದಾರೆ. ಕೆಲವೊಮ್ಮೆ ₹300 ಮಾತ್ರ ಸಿಗುತ್ತದೆ. ಇಂತಹ ಕಡಿಮೆ ಸಂಬಳದಲ್ಲಿ ಮನೆ ನಡೆಸುವುದು ಅಸಾಧ್ಯವಾಗಿದೆ ಎಂದು ಕಣ್ಣೀರಿಟ್ಟರು.

ಕಾರ್ಮಿಕರ ಪ್ರಕಾರ, ಕಂಪನಿಯಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರಿಗೆ ಯಾವುದೇ ವಿಶೇಷ ಸೌಲಭ್ಯ ಅಥವಾ ಪ್ರೋತ್ಸಾಹ ನೀಡಲಾಗುತ್ತಿಲ್ಲ, ವೇತನ ವ್ಯತ್ಯಾಸ, ಬೋನಸ್ ಸಮಸ್ಯೆ, ಹೆಚ್ಚುವರಿ ಕೆಲಸದ ಭತ್ಯೆ ಕೊರತೆ ಹಾಗೂ ಮೂಲಸೌಕರ್ಯಗಳಅಭಾವದಿಂದಕಾರ್ಮಿಕರಲ್ಲಿ ಅಸಮಾಧಾನಹೆಚ್ಚಾಗಿದೆಎನ್ನಲಾಗಿದೆ. ಪ್ರತಿಭಟನೆ ನಡೆಯುತ್ತಿದ್ದಂತೆಕಂಪನಿಆಡಳಿತಮಂಡಳಿಹಾಗೂ ಕಾರ್ಮಿಕರ ನಡುವೆ ಮಾತುಕತೆ ನಡೆಸಲು ಪ್ರಯತ್ನಗಳು ನಡೆದವು. ಆದರೆ ಕಾರ್ಮಿಕರು ತಮ್ಮ ಬೇಡಿಕೆಗಳಿಗೆ ಸ್ಪಷ್ಟ ಭರವಸೆ ನೀಡುವವರೆಗೂ ಹೋರಾಟ ಮುಂದುವರಿಸುವುದಾಗಿ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಕಾರ್ಮಿಕರಾದ ಗಣೇಶ್, ಮಧು, ಕುಮಾರ್, ಮಲ್ಲಿಕ್, ಗೌತಮ್, ಶಶಿಕಲಾ, ಮಂಜುಳಾ, ಭವ್ಯ, ಭಾಗ್ಯ ಸೇರಿದಂತೆ ಹಲವರು ಭಾಗವಹಿಸಿದ್ದರು.


ಸಂಬಳ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆ ಮುಂದಿಟ್ಟು ಶಾಹಿ ಗಾರ್ಮೆಂಟ್ಸ್ ಎದುರು ಜಮಾಯಿಸಿ ಪ್ರತಿಭಟನೆ ನಡೆಸಿದ ಕಾರ್ಮಿಕರು.

ಗೆಲುವಿನ ಬಳಿಕ ಕೋಡಿಮಠದ ಶ್ರೀ ದರ್ಶನ ಪಡೆದ ಉಮೇಶ್ ಮೇಟಿ

ಕೋಡಿ ಮಠ ಶ್ರೀಗಳಿಂದ ಆಶೀರ್ವಾದ, ರಾಜಕೀಯ ಚರ್ಚೆ

• **ಕನ್ನಡಪ್ರಭ ವಾರ್ತೆ** ಅರಸೀಕೆರೆ

ಬಾಗಲಕೋಟೆವಿಧಾನಸಭಾಕ್ಷೇತ್ರದಉಪಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿದ ನೂತನ ಶಾಸಕ ಉಮೇಶ್‌ಮೇಟಿ,ಸುಕ್ಷೇತ್ರಹಾರನಹಳ್ಳಿಕೋಡಿಮಠಕ್ಕೆ ಭೇಟಿ ನೀಡಿ ಪೀಠಾಧ್ಯಕ್ಷರಾದ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಗಳ ಆಶೀರ್ವಾದ ಪಡೆದರು. ಅವರ ಭೇಟಿ ರಾಜಕೀಯ ಹಾಗೂ ಧಾರ್ಮಿಕ ವಲಯಗಳಲ್ಲಿ ಸಾಕಷ್ಟು ಕುತೂಹಲಕ್ಕೆ ಕಾರಣವಾಯಿತು.

ಗುರುವಾರ ರಾತ್ರಿ ಮಠಕ್ಕೆ ಆಗಮಿಸಿದ ಉಮೇಶ್ ಮೇಟಿ, ಮೊದಲು ಶಿವಲಿಂಗಜ್ಜಯ್ಯ ಹಾಗೂ ನೀಲಮ್ಮಜ್ಜಯ್ಯ ಅವರ ಗದ್ದುಗೆಗಳಿಗೆ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಕೋಡಿಮಠದ ಪೀಠಾಧ್ಯಕ್ಷರಾದ ಡಾ.ಶಿವಾನಂದಶಿವಯೋಗಿರಾಜೇಂದ್ರಮಹಾಸ್ವಾಮಿಗಳಿಗೆ ರಜತ ಕಿರೀಟ ಧಾರಣೆ ಮಾಡುವ ಮೂಲಕ ಭಕ್ತಿಭಾವ ಸಮರ್ಪಿಸಿದರು.

ಮಠದಲ್ಲಿ ನಡೆದ ಭೇಟಿಯ ವೇಳೆ ಉಮೇಶ್ ಮೇಟಿ ಹಾಗೂ ಶ್ರೀಗಳ ನಡುವೆ ಒಂದು ಗಂಟೆಗೂ ಹೆಚ್ಚುಕಾಲ ಗೋಪ್ಯ ಸಮಾಲೋಚನೆ ನಡೆದಿರುವುದು ವಿಶೇಷ ಗಮನ ಸೆಳೆಯಿತು. ರಾಜಕೀಯವಾಗಿ ತಮ್ಮ ಮುಂದಿನ ನಡೆ, ಕ್ಷೇತ್ರದ ಅಭಿವೃದ್ಧಿ ಹಾಗೂ ಭವಿಷ್ಯದ ವಿಚಾರಗಳ ಕುರಿತು ಶ್ರೀಗಳ ಮಾರ್ಗದರ್ಶನ ಪಡೆದಿದ್ದಾರೆ ಎಂಬ ಮಾಹಿತಿ ಮಠದ ಮೂಲಗಳಿಂದ ತಿಳಿದುಬಂದಿದೆ.

ಈ ಕುರಿತು ಮಾತನಾಡಿದ ಉಮೇಶ್ ಮೇಟಿ, ''ಕೋಡಿಮಠ ಮತ್ತು ನಮ್ಮ ಕುಟುಂಬದ ನಡುವೆ ಹಲವು ದಶಕಗಳ ಅವಿನಾಭಾವ ಸಂಬಂಧವಿದೆ. ನನ್ನ ತಂದೆ-ತಾತಂದಿರ ಕಾಲದಿಂದಲೂ ಮಠದೊಂದಿಗೆ ನಮ್ಮ ಕುಟುಂಬ ಆಧ್ಯಾತ್ಮಿಕ ಬಾಂಧವ್ಯ ಹೊಂದಿದೆ. ವೈಯಕ್ತಿಕ ಜೀವನದಲ್ಲಿಯೂ, ರಾಜಕೀಯ ಜೀವನದಲ್ಲಿಯೂ ಶ್ರೀಗಳ ಸಲಹೆ-ಸೂಚನೆಗಳನ್ನು ಗೌರವದಿಂದ ಪಾಲಿಸುತ್ತಾ ಬಂದಿದ್ದೇವೆ. ಚುನಾವಣೆಯಲ್ಲಿ ಜನರು ನೀಡಿದ ಆಶೀರ್ವಾದದ ನಂತರ ಶ್ರೀಗಳ ಆಶೀರ್ವಾದ ಪಡೆಯುವುದು ನಮ್ಮ ಕುಟುಂಬದ ಸಂಪ್ರದಾಯ,'' ಎಂದು ಹೇಳಿದರು.

ಈ ವೇಳೆ ಕೋಡಿಮಠದ ಉತ್ತರಾಧಿಕಾರಿಗಳಾದ ಚೇತನ್ ಮರಿದೇವರು ಉಪಸ್ಥಿತರಿದ್ದರು.



ಮೇಟಿ ಕುಟುಂಬದ ಜೊತೆಗೆ ಮಠದ ಬಾಂಧವ್ಯ ಹಳೆಯದು: ಕೋಡಿ ಶ್ರೀ ಹೇಳಿಕೆ

''ಉಮೇಶ್ ಮೇಟಿ ಮಾತ್ರವಲ್ಲ, ಅವರ ತಂದೆ-ತಾತಂದಿರ ಕಾಲದಿಂದಲೂ ಈ ಕುಟುಂಬ ಕೋಡಿಮಠದೊಂದಿಗೆ ಆತ್ಮೀಯ ನಂಟು ಹೊಂದಿದೆ. ಅದೇ ಭಕ್ತಿ-ನಂಬಿಕೆಯಿಂದ ಇಂದು ಉಮೇಶ್ ಮೇಟಿ ಮಠಕ್ಕೆ ಬಂದು ಆಶೀರ್ವಾದ ಪಡೆದಿದ್ದಾರೆಎಂದುಡಾ.ಶಿವಾನಂದಶಿವಯೋಗಿ ರಾಜೇಂದ್ರ ಮಹಾಸ್ವಾಮಿಗಳು ತಿಳಿಸಿದರು.

ಕರ್ನಾಟಕದಲ್ಲಿ ಆನೆ, ಹುಲಿಗಳ ಸಂಖ್ಯೆ ಏರಿಕೆ

ಆನೆಗಳ ಸಂಖ್ಯೆ 6,395, ಹುಲಿಗಳ ಸಂಖ್ಯೆ 563: ಅರಣ್ಯ ಸಚಿವ ಈಶ್ವರ್ ಖಂಡ್ರೆ

• **ಕನ್ನಡಪ್ರಭ ವಾರ್ತೆ** ಬೇಲೂರು

ಮಾನವ-ಆನೆ ಸಂಘರ್ಷ ಇತ್ತೀಚಿನ ದಿನಗಳಲ್ಲಿ ಗಂಭೀರ ಸಮಸ್ಯೆಯಾಗಿ ಪರಿಣಮಿಸಿದ್ದು,ಜನರಜೀವಹಾಗೂರೈತರ ಬೆಳೆ ರಕ್ಷಣೆಗೆ ಸರ್ಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಹೇಳಿದರು.



ಆನೆಗಳ ಹಾವಳಿ ಹೆಚ್ಚಿರುವ ಪ್ರದೇಶಗಳಲ್ಲಿಸಾರ್ವಜನಿಕರು ಹೆಚ್ಚಿನ ಎಚ್ಚರಿಕೆ ವಹಿಸಬೇಕು. ವಿಶೇಷವಾಗಿ ಬೆಳಿಗ್ಗೆ 5ರಿಂದ 7 ಗಂಟೆ ಹಾಗೂ ಸಂಜೆ 5ರಿಂದ 7 ಗಂಟೆಯವರೆಗೆ ಅನಗತ್ಯವಾಗಿ ಹೊರಗೆ ಸಂಚರಿಸಬಾರದು ಎಂದು ಸೂಚನೆ ನೀಡಲಾಗಿದೆ. ಈ ಸಮಯದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿಯಿಂದ ನಿರಂತರ ಗಸ್ತು ಹಾಗೂ ಕಣ್ಗಾವಲು ನಡೆಸಲಾಗುತ್ತಿದೆ. ರಾಜ್ಯದಲ್ಲಿಆನೆಗಳಸಂಖ್ಯೆ 6,395 ಹಾಗೂ ಹುಲಿಗಳ ಸಂಖ್ಯೆ 563ಕ್ಕೆ ಏರಿಕೆಯಾಗಿದೆ. ಅರಣ್ಯಪ್ರದೇಶಗಳುಕುಂಠಿತವಾಗುತ್ತಿರುವ ಹಿನ್ನೆಲೆಯಲ್ಲಿಆನೆಗಳುಕೃಷಿಜಮೀನುಗಳಿಗೆ ನುಗ್ಗುತ್ತಿವೆ. ಈ ಸಮಸ್ಯೆ ತಗ್ಗಿಸಲು ಪುಂಡಾನೆಗಳನ್ನು ಸೆರೆ ಹಿಡಿದು ಸ್ಥಳಾಂತರಿಸುವ ಕಾರ್ಯ ನಡೆಯುತ್ತಿದ್ದು, ಮುಂದಿನ 10 ದಿನಗಳಲ್ಲಿ ಹೊಸ ಆನೆ ಶಿಬಿರ ಆರಂಭಿಸಲಾಗುವುದು ಎಂದು ಹೇಳಿದರು.

ಸುಮಾರು 20 ರಿಂದ 22 ಆನೆಗಳನ್ನು ಗೋವಾ-ಮಹಾರಾಷ್ಟ್ರಗಡಿಭಾಗದಅರಣ್ಯ ಪ್ರದೇಶಗಳಿಗೆ ಸ್ಥಳಾಂತರಿಸುವ ಯೋಜನೆ ಇದೆ. ಸರ್ಕಾರರೈಲ್ವೆಬ್ಯಾರಿಕೇಡ್, ಆನೆತಡೆ ಕಂದಕನಿರ್ಮಾಣಸೇರಿದಂತೆಹಲವುಶಾಶ್ವತ ಕ್ರಮಗಳನ್ನು ಕೈಗೊಂಡಿದೆ. ಡ್ರೋನ್ ಕ್ಯಾಮೆರಾ, ಥರ್ಮಲ್ ಇಮೇಜಿಂಗ್ ತಂತ್ರಜ್ಞಾನಬಳಸಿಆನೆಗಳಚಲನವಲನಗಳ ಮೇಲೆ ನಿಗಾ ಇಡಲಾಗುತ್ತಿದೆ. ಜೊತೆಗೆ ಇಂಟಿಗ್ರೇಟೆಡ್ ಕಮಾಂಡ್ ಸೆಂಟರ್ ಹಾಗೂ ಆಂಟಿ-ಡಿಪ್ರೆಡೇಶನ್ ಕ್ಯಾಂಪ್‌ಗಳನ್ನುಸ್ಥಾಪಿಸಿತರಬೇತಿಪಡೆದ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು.

ರೈತರಬೆಳೆಹಾನಿಗೆಸಕಾಲದಲ್ಲಿಪರಿಹಾರ ನೀಡುವುದುಸರ್ಕಾರದಆದ್ಯತೆಯಾಗಿದ್ದು, ರಾಜ್ಯಾದ್ಯಂತ ₹60 ಕೋಟಿ ಬಿಡುಗಡೆ ಮಾಡಲಾಗಿದೆ. ಕಳೆದವರ್ಷದಎಲ್ಲಾಬಾಕಿ ಪರಿಹಾರವನ್ನು ವಿತರಿಸಲಾಗಿದ್ದು, ರೈತರು ತಿಂಗಳುಗಟ್ಟಲೆ ಕಾಯುವ ಪರಿಸ್ಥಿತಿ ಈಗ ಇಲ್ಲ. ಮಾನವ ಜೀವ ರಕ್ಷಣೆ ಸರ್ಕಾರದ ಅತ್ಯುನ್ನತ ಆದ್ಯತೆಯಾಗಿದ್ದು, ಮಾನವ-ವನ್ಯಜೀವಿ ಸಂಘರ್ಷ ತಡೆಗೆ ಅಗತ್ಯವಾದ ಎಲ್ಲ ಕ್ರಮಗಳನ್ನು ಸರ್ಕಾರ ಕೈಗೊಳ್ಳಲಿದೆ. ಪರಿಸರ ಸಂರಕ್ಷಣೆಗೆ ತಮ್ಮ ಬದುಕನ್ನೇ ಮುಡಿಪಾಗಿಟ್ಟಿರುವ ಪರಿಸರ ಪ್ರೇಮಿಗಳ ಸೇವೆಯನ್ನು ಸ್ಮರಿಸಿ, ಅವರ ಸ್ಮರಣಾರ್ಥ 25 ಎಕರೆ ಭೂಮಿಯನ್ನು ಮೀಸಲಿಟ್ಟು ₹25 ಕೋಟಿ ವೆಚ್ಚದ ಸ್ಮಾರಕ ಯೋಜನೆ ರೂಪಿಸಲಾಗಿದೆ ಎಂದು ಹೇಳಿದರು.

2026-27ನೇ ಸಾಲಿನ ಹಾಸನ ಜಿಲ್ಲಾ ಸಾಲ ಯೋಜನೆ ಬಿಡುಗಡೆ ಕಾರ್ಯಕ್ರಮ

ಹಾಸನ: 2026-27ನೇ ಆರ್ಥಿಕ ವರ್ಷದ ಹಾಸನ ಜಿಲ್ಲಾ ಸಾಲ ಯೋಜನೆಯನ್ನು ಇಂದು ಹಾಸನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳಾದ ಲತಾ ಕುಮಾರಿ ಕೆ ಎಸ್ ಅವರ ಅಧ್ಯಕ್ಷತೆಯಲ್ಲಿ ಬಿಡುಗಡೆ ಮಾಡಲಾಯಿತು.

ಜಿಲ್ಲಾ ಸಾಲ ಯೋಜನೆಯನ್ನು ಬಿಡುಗಡೆಗೊಳಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಬ್ಯಾಂಕುಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು. ಕೃಷಿಮತ್ತು ಸಂಬಂಧಿತಚಟುವಟಿಕೆಗಳು, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು, ಸ್ವಸಹಾಯ ಗುಂಪುಗಳು, ಶಿಕ್ಷಣ, ಗೃಹ ನಿರ್ಮಾಣ ಸೇರಿದಂತೆ ಆದ್ಯತಾಕ್ಷೇತ್ರಗಳಿಗೆ ಸಮರ್ಪಕ ಮತ್ತು ಸಮಯೋಚಿತ ಸಾಲ ವಿತರಣೆ ಮಾಡಬೇಕು ಎಂದು ಬ್ಯಾಂಕುಗಳಿಗೆ ಸೂಚಿಸಿದರು. ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಬೀಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ ಸೇರಿದಂತೆ ವಿವಿಧಜನೋಪಯೋಗಿ ಯೋಜನೆಗಳಡಿ ಗುರಿಸಾಧನೆಗೆ ಬ್ಯಾಂಕುಗಳು ಶ್ರಮಿಸಬೇಕು ಹಾಗೂ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಬ್ಯಾಂಕುಗಳು ಇಲಾಖೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಬೇಕು ಎಂದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಲತಾ ಸರಸ್ವತಿಯವರು ಜಿಲ್ಲಾಸಾಲಯೋಜನೆಯಮುಖ್ಯಾಂಶಗಳನ್ನುವಿವರಿಸಿದರು. ಕಾರ್ಯಕ್ರಮದ ಕೊನೆಯಲ್ಲಿ ಲೀಡ್ ಬ್ಯಾಂಕ್ ವಸ್ಥಾಪಕರು ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಕೆನರಾ ಬ್ಯಾಂಕ್‌ನ ಪ್ರಾದೇಶಿಕ ವ್ಯವಸ್ಥಾಪಕರಾದ ತುಕಾರಾಮ್, ಕರ್ನಾಟಕ ಗ್ರಾಮೀಣ ಬ್ಯಾಂಕಿನ ಪ್ರಾದೇಶಿಕ ವ್ಯವಸ್ಥಾಪಕರಾದ ರಾಚಪ್ಪ ಹಾಗೂ ಹಾಸನದ ಇತರೆ ಮುಂಚೂಣಿ 10 ಬ್ಯಾಂಕುಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದರು.

ನಗರದ ಸ್ವಚ್ಛತೆ ಪೌರಕಾರ್ಮಿಕರ ಜವಾಬ್ದಾರಿ ಮಾತ್ರವಲ್ಲ: ಶಾಸಕ

ಖಾಲಿ ನಿವೇಶನಗಳ ಸ್ವಚ್ಛತೆ ಕಾಪಾಡಲು ಮಾಲೀಕರಿಗೆ ನೋಟಿಸ್ ನೀಡಲು ಅಧಿಕಾರಿಗಳಿಗೆ ಸೂಚಿಸಿದ ಶಿವಲಿಂಗೇಗೌಡ

• **ಕನ್ನಡಪ್ರಭ ವಾರ್ತೆ** ಅರಸೀಕೆರೆ

ನಗರವನ್ನು ಸ್ವಚ್ಛ ಹಾಗೂ ಸುಂದರವಾಗಿಡುವುದು ಕೇವಲ ಪೌರಕಾರ್ಮಿಕರ ಹೊಣೆಗಾರಿಕೆ ಅಲ್ಲ, ಸಾರ್ವಜನಿಕರೂ ತಮ್ಮ ಜವಾಬ್ದಾರಿಯನ್ನು ಅರಿತು ಸಹಕರಿಸಬೇಕು ಎಂದು ರಾಜ್ಯ ಗೃಹ ಮಂಡಳಿ ಅಧ್ಯಕ್ಷರು ಹಾಗೂ ಶಾಸಕ ಕೆ.ಎಂ. ಶಿವಲಿಂಗೇಗೌಡ ಹೇಳಿದರು.

ನಗರಸಭೆ ವತಿಯಿಂದ ಸ್ವಚ್ಛ ಭಾರತ್ ಮಿಷನ್ (ನಗರ) 2.0 ಯೋಜನೆಯಡಿ ಆಯೋಜಿಸಿದ್ದ ಪ್ಲಾಸ್ಟಿಕ್ ಬಳಕೆ ನಿಷೇಧ, ಹಸಿ, ಒಣ ಕಸ ವಿಂಗಡಣೆ ಮತ್ತು ನಗರ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸುವ ಸ್ವಚ್ಛತಾ ರ್‍ಯಾಲಿಗೆ ಚಾಲನೆ ನೀಡಿ ಮಾತನಾಡಿದ ಅವರು ''ನಗರವನ್ನು ಸ್ವಚ್ಛವಾಗಿಡಲು ಪೌರಕಾರ್ಮಿಕರು ಹಗಲು-ರಾತ್ರಿ ಎನ್ನದೇ ಶ್ರಮಿಸುತ್ತಿದ್ದಾರೆ. ಅವರ ಸೇವೆ ಅಮೂಲ್ಯವಾದದ್ದು. ಆದರೆ ಕೆಲ ಸಾರ್ವಜನಿಕರು ಸಾರ್ವಜನಿಕ ಸ್ಥಳಗಳಲ್ಲೇ ಕಸ ಎಸೆಯುವುದು, ಅಸ್ವಚ್ಛತೆ ಸೃಷ್ಟಿಸುವುದು ನಾಗರಿಕ ಸಮಾಜಕ್ಕೆ ಶೋಭೆ ತರುವಂತಹ ನಡೆ ಅಲ್ಲ,'' ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಗರ ವ್ಯಾಪ್ತಿಯ ಖಾಸಗಿ ನಿವೇಶನಗಳು ಹಾಗೂ ಹೊಸದಾಗಿ ಅಭಿವೃದ್ಧಿಪಡಿಸಿರುವ ಲೇಔಟ್‌ಗಳಲ್ಲಿ ಗಿಡಗಂಟಿಗಳು ಬೆಳೆದು ಕಾಡು ಪ್ರಾಣಿಗಳಿಗೆ ಆಶ್ರಯ ತಾಣವಾಗುತ್ತಿರುವ ಬಗ್ಗೆ ಗಮನ ಸೆಳೆದ ಶಾಸಕರು, ಸಂಬಂಧಪಟ್ಟ ನಿವೇಶನ ಮಾಲೀಕರಿಗೆ ನಗರಸಭೆ ಅಧಿಕಾರಿಗಳು ನೋಟಿಸ್ ನೀಡಿ ಸ್ವಚ್ಛತೆ ಕಾಪಾಡುವಂತೆ ಸೂಚನೆ ನೀಡಬೇಕು ಎಂದು ಹೇಳಿದರು.

ಇನ್ನೂ, ರಾಷ್ಟ್ರೀಯ ಹೆದ್ದಾರಿ 206 ಮತ್ತು ಟಿ.ಎಚ್. ರಸ್ತೆಯ ಎರಡೂ ಬದಿಗಳಲ್ಲಿ ಅನಧಿಕೃತವಾಗಿ ಸ್ಥಾಪಿಸಿರುವ ಫುಟ್‌ಪಾತ್ ಅಂಗಡಿಗಳಿಂದ ಪಾದಚಾರಿಗಳಿಗೆ ತೀವ್ರ ತೊಂದರೆ ಉಂಟಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಫುಟ್‌ಪಾತ್ ವ್ಯಾಪಾರಿಗಳ ಜೀವನ ಭದ್ರತೆಯೂ ಮುಖ್ಯ. ಆದ್ದರಿಂದ ಅವರಿಗೆ ಶೀಘ್ರದಲ್ಲೇ ಸೂಕ್ತ ಮಳಿಗೆಗಳ ವ್ಯವಸ್ಥೆ ಕಲ್ಪಿಸಲಾಗುವುದು. ಆದರೆ ಅದುವರೆಗೆ ಪಾದಚಾರಿಗಳಿಗೆ ತೊಂದರೆ ಆಗದಂತೆ ನಗರಸಭೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು.

ನಗರಸಭೆ ಪೌರಾಯುಕ್ತ ಕೃಷ್ಣಮೂರ್ತಿ ಮಾತನಾಡಿ, ಸಿಬ್ಬಂದಿ ಕೊರತೆಯ ನಡುವೆಯೂ ನಗರಸಭೆ ಸ್ವಚ್ಛತೆ ಕಾಪಾಡಲು ಶ್ರಮಿಸುತ್ತಿದೆ. ಆದರೆ ಸಾರ್ವಜನಿಕರಿಂದ ನಿರೀಕ್ಷಿತ ಮಟ್ಟದ ಸಹಕಾರ ಸಿಗುತ್ತಿಲ್ಲ,'' ಎಂದು ಬೇಸರ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಬಳಿಕ ಪೌರಕಾರ್ಮಿಕರು, ನಗರಸಭೆ ಸಿಬ್ಬಂದಿ ಹಾಗೂ ಸಾರ್ವಜನಿಕರು ಸೇರಿ ನಗರದಲ್ಲಿ ಸ್ವಚ್ಛತಾ ಜಾಥಾ ನಡೆಸಿದರು. ನಗರ ಸ್ವಚ್ಛತೆ ಕಾಪಾಡುವಲ್ಲಿ ಸಾರ್ವಜನಿಕರ ಪಾತ್ರ ಕುರಿತು ಜಾಗೃತಿ ಮೂಡಿಸಲಾಯಿತು.



ನಗರಸಭೆ ವತಿಯಿಂದ ಪ್ಲಾಸ್ಟಿಕ್ ಬಳಕೆ ನಿಷೇಧ, ಹಸಿ-ಒಣ ಕಸ ವಿಂಗಡಣೆ ಮತ್ತು ನಗರ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸುವ ಸ್ವಚ್ಛತಾ ರ್‍ಯಾಲಿ ಆಯೋಜಿಸಲಾಗಿತ್ತು.

ಬುಡಕಟ್ಟುಗಳ ಆಯೋಗದ ಅಧ್ಯಕ್ಷರು, ಸದಸ್ಯರ ಪ್ರವಾಸ 11ರಂದು

ಹಾಸನ: ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧ್ಯಕ್ಷರಾದ ಡಾ. ಮೂರ್ತಿ .ಎಲ್ ಹಾಗೂ ಸದಸ್ಯರಾದ ಎಂ. ಕುಂಬಯ್ಯ, ಸುನೀಲ್ ಎಂ ಉಕ್ಕಲಿ, ಎನ್ .ದಿವಾಕರ್, ಮತ್ತು ಗೀತಾ ಥಾಂವಶಿ ಹಾಗೂ ಕಾರ್ಯದರ್ಶಿಗಳಾದ ಡಾ. ಎಚ್. ಎಸ್ ಶಿವರಾಮು ಅವರು ಮೇ 11ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಮಾಡಲಿರುವರು. ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಅಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳು, ಪೊಲೀಸ್ ಅಧೀಕ್ಷಕರು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಸಂಘ ಸಂಸ್ಥೆಯ ಪದಾಧಿಕಾರಿಗಳೊಂದಿಗೆ ಸಭೆ, ಅಹವಾಲು ಸ್ವೀಕಾರ ಹಾಗೂ ಕುಂದುಕೊರತೆ ಸಭೆ ನಡೆಸಲಿದ್ದಾರೆ, ಮಧ್ಯಾಹ್ನ ಪತ್ರಿಕಾಗೋಷ್ಠಿ ನಡೆಸಲಿದ್ದಾರೆ.